# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂಗಳವರ ನ್ಯಾಯಾಲಯ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ

## ಎಂ.ವಿ.ಸಿ.ನಂ. 164/2020

ಆರ್‌ಡಬ್ಲ್ಯೂ: 1

ದಿನಾಂಕ 06/03/2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ: 3 ನೇ ಎದುರುದಾರರ ಪರ: ಶ್ರೀ ಸಿ ಜೆ ಎಂ ವಕೀಲರಿಂದ:

ನಾನು ಈ ಅರ್ಜಿಯಲ್ಲಿ 3 ನೇ ಎದುರುದಾರರ ಕಂಪನಿಯಲ್ಲಿ ಹಿರಿಯ ಸಹಾಯಕರಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಹೇಳಿಕೆ ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯವೆಲ್ಲಾ ಸತ್ಯವಾಗಿರುತ್ತದೆ. ಅದನ್ನು ಓದಿ ನೋಡಿ ಸಹಿ ಮಾಡಿರುತ್ತೇನೆ.

ಕಂಪನಿಯವರು ನೀಡಿರುವ ಆತರೈಸೇಷನ್ ಲೆಟರನ್ನು ಹಾಜರುಪಡಿಸಿದ್ದು ಅದನ್ನು ನಿಆರ್-1 ಎಂದು, ವಿಮಾ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್-2 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿದಾರರ ಅರ್ಜಿಯನ್ನು ವಜಾ ಮಾಡಬೇಕಾಗಿ ಕೇಳಿಕೊಳ್ಳುತ್ತೇನೆ.

ಪಾಟೀ ಸವಾಲು: ಅರ್ಜಿದಾರರ ಪರ: ಶ್ರೀಮತಿ ಡಿ ಸಿ ಎಸ್ ವಕೀಲರಿಂದ:

ದಿನಾಂಕ **15/09/2019** ರಂದು ಬುಲೆರೋ ವಾಹನಕ್ಕೆ ವಿಮಾ ಪಾಲಿಸಿ ಚಾಲ್ತಿಯಲ್ಲಿತ್ತು ಎಂದರೆ ಸರಿ. ಮೃತ ಅರ್ಜಿದಾರರು ಸದರಿ ವಾಹನದಲ್ಲಿ ಅಧಿಕೃತವಾಗಿ ಪ್ರಯಾಣ ಮಾಡುತ್ತಿದ್ದರು ಎಂದರೆ ಸರಿಯಲ್ಲ. ಅಪಘಾತವಾದ ನಂತರ ಮೃತ ಅರ್ಜಿದಾರರು

ಶಿವಮೊಗ್ಗದ ಅಶೋಕ ಸಂಜೀವಿನಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಚಿಕಿತ್ಸೆ ಫಲಕಾರಿಯಾಗದೇ ಅಪಘಾತವಾದ ಗಾಯಗಳಿಂದಲೇ ಅರ್ಜಿದಾರರಾದ ನಿಂಗಮ್ಮ ರವರು ಮೃತ ಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ಸದರಿ ನಿಂಗಮ್ಮರವರು ಮೃತಪಡುವವರೆಗೂ ಸತತ ಚಿಕಿತ್ಸೆ ಪಡೆಯುತ್ತಿದ್ದರು ಎಂದರೆ ಸರಿಯಲ್ಲ. 1 ನೇ ಎದುರುದಾರರು ಸೂಕ್ತವಾದ ಚಾಲನಾ ಪರವಾನಿಗಿ ಹೊಂದಿರುವುದರಿಂದ ನಮ್ಮ ಕಂಪನಿಯವರೇ ಪರಿಹಾರ ನೀಡಬೇಕು ಎಂದರೆ ಸರಿಯಲ್ಲ. ಮೂಲ ಅರ್ಜಿದಾರರಾದ ನಿಂಗಮ್ಮರವರು ಮರಣ ಹೊಂದಿದ ನಂತರ ಅವರ ವಾರಸುದಾರರನ್ನು ಈ ಅರ್ಜಿಯಲ್ಲಿ ಪಕ್ಷಗಾರರಾಗಿದ್ದು ಪರಿಹಾರ ಪಡೆಯಲು ಅವರು ಅರ್ಹರಾಗಿರುತ್ತಾರೆ ಎಂದರೆ ಸರಿಯಲ್ಲ.

ಮರುವಿಚಾರಣೆ: ಇಲ್ಲ

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

ಓ ಹೇ ಕೇ ಸ ಇ ಎ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ, ಕಡೂರು.